
# ಎನ್.ಟಿ.ಎಸ್.ಇ ಮತ್ತು ಎನ್.ಎಂ.ಎಂ.ಎಸ್ ಪರೀಕ್ಷೆಗಳು





ವಿ. ಸುಮಂಗಲ. ನಿರ್ದೇಶಕರು, ಕ.ಪ್ರೌ.ಶಿ.ಪ.ಮಂಡಳಿ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರು, ಕೆ.ಎಸ್.ಕ್ಯು.ಎ.ಎ.ಸಿ, ಬೆಂಗಳೂರು-03.

21 ನೇ ಶತಮಾನವು ಸ್ಪರ್ಧಾತ್ಮಕ ಜಗತ್ತಾಗಿದ್ದು, ಇದು ಶಿಕ್ಷಣ ಸೇ-ರಿದಂತೆ ಎಲ್ಲಾ ಕ್ಷೇತ್ರಗಳಿಗೂ ಅನ್ವಯಿಸುವ ಮಾತಾಗಿದೆ. ಹಾಗಾಗಿ ವಿದ್ಯಾರ್ಥಿಗಳನ್ನು ಪಠ್ಯ ಕಲಿಕೆಯ ಜೊತೆ ಜೊತೆಯಲ್ಲೇ ಸ್ಪರ್ಧಾ ಜಗತ್ತಿಗೆ ಪರಿಚಯಿಸುವುದು ಶಿಕ್ಷಣದ ಮೂಲೋದ್ದೇಶಗಳಲ್ಲಿ ಒಂದಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ/ರಾಜ್ಯ ಸರ್ಕಾರಗಳು ಶಿಕ್ಷಣ ಇಲಾಖೆಯ ಮೂಲಕ ಶಾಲಾ ಹಂತದಲ್ಲೇ ವಿದ್ಯಾರ್ಥಿಗಳಿಗೆ ಅನೇಕ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪರಿಚಯಿಸಲಾಗುತ್ತಿದೆ. ಇಂತಹ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಕೇಂದ್ರ ಸರ್ಕಾರದ ಪ್ರಾಯೋಜ-ಕತ್ವದ ಎನ್.ಟಿ.ಎಸ್.ಇ ಮತ್ತು ಎನ್.ಎಂ.ಎಂ.ಎಸ್ ಪರೀಕ್ಷೆಗಳು ಮುಖ್ಯವಾದವುಗಳಾಗಿವೆ.

ಕರ್ನಾಟಕ ರಾಜ್ಯದಲ್ಲಿ ಈ ಎರಡೂ ಪರೀಕ್ಷೆಗಳನ್ನು 2018-19ನೇ ಸಾಲಿನವರೆಗೆ ಡಿ.ಎಸ್.ಇ.ಆರ್.ಟಿ ವತಿಯಿಂದ ನಡೆಸಲಾಗುತ್ತಿದ್ದು 2019-20ನೇ ಸಾಲಿನಿಂದ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತಿನ (ಕೆ.ಎಸ್.ಕ್ಯು.ಎ.ಎ.ಸಿ) ವತಿಯಿಂದ ನಡೆಸಲು ಸರ್ಕಾರ ಆದೇಶ ಹೊರಡಿಸಿದೆ. ಈ ಪರೀಕ್ಷೆಗಳಿಗೆ 2019-20 ನೇ ಸಾಲಿನಿಂದ ಪ್ರಥಮ ಬಾರಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ ಪರೀಕ್ಷೆಯನ್ನು ನಡೆಸಲಾಯಿತು. ಅದೇ ರೀತಿ 2020-21 ನೇ ಸಾಲಿನಲ್ಲೂ ಎರಡೂ ಪರೀಕ್ಷೆಗಳನ್ನು ನಡೆಸಲು ಯೋಜಿಸಲಾಗಿದೆ.

ಸಾಮಾನ್ಯವಾಗಿ ಈ ಎರಡೂ ಪರೀಕ್ಷೆಗಳನ್ನು ಪ್ರತಿ ವರ್ಷ ನವೆಂಬರ್/ಡಿಸೆಂಬರ್ ತಿಂಗಳಿನಲ್ಲಿ ನಡೆಸಲಾಗುತ್ತಿದ್ದು ಪ್ರಸಕ್ತ ಸಾಲಿನಲ್ಲಿ ಎನ್.ಟಿ.ಎಸ್.ಇ ಪರೀಕ್ಷೆಯನ್ನು ದಿನಾಂಕ: 13.12.2020 ರಂದು ನಡೆಸಲು ಎನ್.ಸಿ.ಇ.ಆರ್.ಟಿ ಇಂದ ಆದೇಶವಾಗಿತ್ತು. ಆದರೆ ಕೋವಿಡ್-19 ರ ಹಿನ್ನೆಲೆಯಲ್ಲಿ ದಿನಾಂಕ:25.01.2021 ರಂದು ಈ ಪರೀಕ್ಷೆಗಳನ್ನು ನಡೆಸಲು ಕರ್ನಾಟಕ ಸರ್ಕಾರ ಹಾಗೂ ಎನ್.ಸಿ.ಇ.ಆರ್.ಟಿ ಇವರಿಂದ ಅನುಮತಿ ಪಡೆಯಲಾಗಿದೆ. ಅದರಂತೆ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ದಿನಾಂಕ: 25.01.2021 ರಂದೇ ಎನ್.ಎಂ.ಎಂ.ಎಸ್ ಪರೀಕ್ಷೆಯನ್ನೂ ಕೂಡ ನಡೆಸಲಾಗುವುದು. ಈ ಎರಡೂ ಪರೀಕ್ಷೆಗಳಿಗೆ ಶಾಲಾ ಮುಖ್ಯಶಿಕ್ಷಕರು ಮಂಡಳಿಯ ವೆಬ್‌ಸೈಟ್‌ನ ಶಾಲಾ ಲಾಗಿನ್ ಮೂಲಕ ತಮ್ಮ ಶಾಲೆಯ ವಿದ್ಯಾರ್ಥಿಗಳ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಶಾಲಾ ಮುಖ್ಯ ಶಿಕ್ಷಕರಿಗೆ ಯಾವುದೇ ಗೊಂದಲ ಉಂಟಾಗದಂತೆ ಅರ್ಜಿ ಸಲ್ಲಿಸಲು ಉಪಯೋಗವಾಗುವಂತೆ ಪ್ರತ್ಯೇಕ ಸುತ್ತೋಲೆ, ಫ್ಲೋ ಚಾರ್ಟ್, ಬಳಕೆದಾರರ ಕೈಪಿಡಿಗಳನ್ನು ಕೆ.ಎಸ್.ಇ.ಇ.ಬಿ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗಿತ್ತು.

## ರಾಷ್ಟ್ರೀಯ ಪ್ರತಿಭಾನ್ವೇಷಣಾ ಪರೀಕ್ಷೆ

ರಾಷ್ಟ್ರೀಯ ಪ್ರತಿಭಾನ್ವೇಷಣಾ ಪರೀಕ್ಷೆ (National Talent Search Examination-NTSE) ಯನ್ನು ಎನ್.ಸಿ.ಇ.ಆರ್.ಟಿ ಇವರ ಮಾರ್ಗದರ್ಶನದಲ್ಲಿ 1963 ರಿಂದಲೂ ನಡೆಸಲಾಗುತ್ತಿದ್ದು, ಇದು ವಿದ್ಯಾರ್ಥಿಗಳಿಗಾಗಿ ರಾಷ್ಟ್ರಮಟ್ಟದಲ್ಲಿ ನಡೆಯುವ ಅತ್ಯಂತ ಪ್ರತಿಷ್ಠಿತ ಸ್ಪರ್ಧಾತ್ಮಕ ಪರೀಕ್ಷೆಯಾಗಿದೆ. ಈ ಪರೀಕ್ಷೆಯನ್ನು ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ (State/CBSE/ICSE) ಶಾಲೆಗಳಲ್ಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆಸಲು ಹಾಗೂ ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲು ನಡೆಸಲಾಗುತ್ತಿದೆ. ಕರ್ನಾಟಕದಲ್ಲಿ ಸದರಿ ಪರೀಕ್ಷೆಯನ್ನು ಕನ್ನಡ, ಇಂಗ್ಲಿಷ್, ಮರಾಠಿ ಹಾಗೂ ಉರ್ದು ಮಾಧ್ಯಮಗಳಲ್ಲಿ ನಡೆಸಲಾಗುತ್ತಿದೆ.

## ಎನ್.ಟಿ.ಎಸ್.ಇ ಪರೀಕ್ಷೆಗೆ ಅರ್ಹತೆ

* ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪ್ರಸ್ತುತ 10 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರಬೇಕು ಹಾಗೂ 9ನೇ ತರಗತಿಯಲ್ಲಿ ಶೇ.55 ರಷ್ಟು ಅಂಕಗಳನ್ನು ಗಳಿಸಿರಬೇಕು.
* ದೂರ ಶಿಕ್ಷಣದ ಮೂಲಕ 10ನೇ ತರಗತಿಗೆ ನೋಂದಾಯಿಸಿಕೊಂಡಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. (ಅರ್ಜಿ ಸಲ್ಲಿಸುವ ವರ್ಷದ ಜುಲೈ 1ಕ್ಕೆ 18 ವರ್ಷ ಮೀರಿರಬಾರದು)

ಎನ್.ಟಿ.ಎಸ್.ಇ ಪರೀಕ್ಷೆಯನ್ನು ಪ್ರಥಮ ಹಂತ- ರಾಜ್ಯ ಮಟ್ಟದಲ್ಲಿ ಹಾಗೂ ದ್ವಿತೀಯ ಹಂತ- ರಾಷ್ಟ್ರ ಮಟ್ಟದಲ್ಲಿ ಎರಡು ಹಂತದಲ್ಲಿ ನಡೆಸಲಾಗುತ್ತಿದೆ. ರಾಜ್ಯ ಮಟ್ಟದಲ್ಲಿ ನಡೆಸುವ ಪ್ರಥಮ ಹಂತದ




ಪರೀಕ್ಷೆಯು 2 ಪ್ರಶ್ನೆಪತ್ರಿಕೆಗಳನ್ನು ಒಳಗೊಂಡಿರುತ್ತದೆ.

**ಪತ್ರಿಕೆ–1.** ಬೌದ್ಧಿಕ ಸಾಮರ್ಥ್ಯ ಪರೀಕ್ಷೆ : (Mental Ability Test -MAT)

**ಪತ್ರಿಕೆ–2.** ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ : (Scholastic Aptitude Test- SAT)

**ಅರ್ಹತಾ ಅಂಕಗಳು ಮತ್ತು ಸೀಟು ಹಂಚಿಕೆ ವಿವರ** : ಎನ್.ಟಿ.ಎಸ್.ಇ ಪರೀಕ್ಷೆಯಲ್ಲಿ ಸಾಮಾನ್ಯ ವರ್ಗ, ಇತರೆ ಹಿಂದುಳಿದ ವರ್ಗಗಳು ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗ **(EWSs)**ದ ವಿದ್ಯಾರ್ಥಿಗಳು ಶೇ.40 ರಷ್ಟು ಅರ್ಹತಾ ಅಂಕಗಳನ್ನು ಗಳಿಸಬೇಕು. ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ವಿದ್ಯಾರ್ಥಿಗಳು ಶೇ.32 ರಷ್ಟು ಅರ್ಹತಾ ಅಂಕಗಳನ್ನು ಗಳಿಸಬೇಕು. ವಿಕಲಚೇತನ ಅಭ್ಯರ್ಥಿಗಳಿಗೆ ಶೇ. 4 ರಷ್ಟು ಮೀಸಲಾತಿ ಇರುತ್ತದೆ.

**ದ್ವಿತೀಯ ಹಂತ** : ರಾಜ್ಯಮಟ್ಟದ ಪ್ರಥಮ ಹಂತದ ಎನ್.ಟಿ.ಎಸ್ ಪರೀಕ್ಷೆಯಲ್ಲಿ ಅರ್ಹತೆಗಳಿಸಿದ 371 ವಿದ್ಯಾರ್ಥಿಗಳಿಗೆ ಎನ್.ಸಿ.ಇ.ಆರ್.ಟಿ., ದೆಹಲಿ ಇವರ ವತಿಯಿಂದ ದ್ವಿತೀಯ ಹಂತದ ರಾಷ್ಟ್ರಮಟ್ಟದ ಪರೀಕ್ಷೆಯನ್ನು ನಡೆಸಲಾಗುತ್ತದೆ.

**ವಿದ್ಯಾರ್ಥಿ ವೇತನ** : ದ್ವಿತೀಯ ಹಂತದ ರಾಷ್ಟ್ರಮಟ್ಟದ ಪರೀಕ್ಷೆಯಲ್ಲಿ ಅಂತಿಮವಾಗಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರಥ–ಮ ಮತ್ತು ದ್ವಿತೀಯ ಪಿ.ಯು.ಸಿ ಹಂತದಲ್ಲಿ ಪ್ರತಿ ತಿಂಗಳು ರೂ 1,250/–ಗಳನ್ನು, ಪದವಿ ಮತ್ತು ಸ್ನಾತಕೋತ್ತರ ಪದವಿ ಹಂತದಲ್ಲಿ ರೂ 2,000/–ಗಳನ್ನು ಹಾಗೂ ಉನ್ನತ ಶಿಕ್ಷಣ ವ್ಯಾಸಂಗದ ಹಂತದಲ್ಲಿ ಯು.ಜಿ.ಸಿ ನಿಯಮಾನುಸಾರ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತದೆ.

## ನ್ಯಾಷನಲ್ ಮೀನ್ಸ್–ಕಮ್–ಮೆರಿಟ್ ವಿದ್ಯಾರ್ಥಿ ವೇತನ ಯೋಜನೆ(ಎನ್.ಎಂ.ಎಂ.ಎಸ್)

ಎನ್.ಎಂ.ಎಂ.ಎಸ್ ಪರೀಕ್ಷೆಯನ್ನು 2007 ರಿಂದ Department of School Education and Literacy - DSEL, New Delhi, ಇವರ ಮಾರ್ಗದರ್ಶನದಲ್ಲಿ ಪರೀಕ್ಷೆಯನ್ನು ನಡೆಸಲಾಗುತ್ತದೆ.

### ಎನ್.ಎಂ.ಎಂ.ಎಸ್ ಪರೀಕ್ಷೆಗೆ ಅರ್ಹತೆ

ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ ಶಾಲೆಗಳಲ್ಲಿ 8 ನೇ ತರಗತಿಯಲ್ಲಿ ಕನ್ನಡ, ಇಂಗ್ಲೀಷ್, ಉರ್ದು, ಮರಾಠಿ ಮತ್ತು ತೆಲುಗು ಮಾಧ್ಯಮಗಳ ರೆಗ್ಯುಲರ್ ವಿದ್ಯಾರ್ಥಿಯಾಗಿ ವ್ಯಾಸಂಗ ಮಾಡುತ್ತಿರಬೇಕು. (ಅನುದಾನರಹಿತ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅನುದಾನದಿಂದ ನಡೆಯುವ ವಸತಿಯುತ ಶಾಲೆಗಳ ವಿದ್ಯಾರ್ಥಿಗಳು ಈ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.)

* ಪೋಷಕರ ವಾರ್ಷಿಕ ವರಮಾನ ರೂ.1,50,000/– ಮೀ–ರಿರಬಾರದು.

* 7ನೇ ತರಗತಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.55 ಅಂಕಗಳನ್ನು (ಅಥವಾ ಪೂರಕ ಗ್ರೇಡ್) ಪಡೆದಿರಬೇಕು.

* ಪ.ಜಾ ಮತ್ತು ಪ.ಪಂ ವಿದ್ಯಾರ್ಥಿಗಳಿಗೆ ಶೇ.5 ರಷ್ಟು ವಿನಾಯಿತಿ ಇರುತ್ತದೆ.

ಎನ್.ಎಂ.ಎಂ.ಎಸ್ ಪರೀಕ್ಷೆಯು ಬಹುಆಯ್ಕೆ ಮಾದರಿಯ ಎರಡು ಪ್ರಶ್ನೆಪತ್ರಿಕೆಗಳನ್ನು ಒಳಗೊಂಡಿರುತ್ತದೆ.

**ಪತ್ರಿಕೆ–1.** ಬೌದ್ಧಿಕ ಸಾಮರ್ಥ್ಯ ಪರೀಕ್ಷೆ:– (Mental Ability Test -MAT)

**ಪತ್ರಿಕೆ–2.** ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ:–(Scholastic Aptitude Test- SAT)

**ಅರ್ಹತಾ ಅಂಕಗಳು ಮತ್ತು ಸೀಟು ಹಂಚಿಕೆ ವಿವರ :** ಸಾಮಾನ್ಯ ಮತ್ತು ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಎರಡೂ ಪತ್ರಿಕೆಗಳಲ್ಲಿ ಸರಾಸರಿ ಕನಿಷ್ಠ ಶೇ.40 ರಷ್ಟು ಅಂಕಗಳನ್ನು ಹಾಗೂ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳು ಎರಡೂ ಪತ್ರಿಕೆಗಳಲ್ಲಿ ಸರಾಸರಿ ಕನಿಷ್ಠ ಶೇ.32 ರಷ್ಟು ಅಂಕಗಳನ್ನು ಪಡೆಯಬೇಕು. ಪ್ರತಿ ಜಿಲ್ಲೆಯಲ್ಲಿ ಪರೀಕ್ಷೆ ಬರೆದ ಒಟ್ಟು ವಿದ್ಯಾರ್ಥಿಗಳಲ್ಲಿ ವಿವಿಧ ಜಾತಿ/ವರ್ಗಗಳ ವಿದ್ಯಾರ್ಥಿಗಳನ್ನು ಚಾಲ್ತಿಯಲ್ಲಿರುವ ಮೀಸಲಾತಿ ಹಾಗೂ ಅರ್ಹತಾ ನಿಯಮಗಳ ಅನುಸಾರ ರ್‍ಯಾಂಕ್ ಆಧರಿಸಿ ಆಯಾ ಜಿಲ್ಲಾ ಕೋಟಾದನ್ವಯ ಒಟ್ಟು 5534 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು.

**ವಿದ್ಯಾರ್ಥಿ ವೇತನ** : ಆಯ್ಕೆಯಾದವರಿಗೆ 9ನೇ ತರಗತಿಯಿಂದ ತಿಂಗಳಿಗೆ ರೂ.1000/–ರಂತೆ ವರ್ಷಕ್ಕೆ ರೂ. 12,000/– ಗಳನ್ನು 4 ವರ್ಷಗಳವರೆಗೆ (ದ್ವಿತೀಯ ಪಿ.ಯು.ಸಿ ಯವರೆಗೆ) ವಿದ್ಯಾರ್ಥಿ ವೇತನವನ್ನು ನೀಡಲಾಗುವುದು. ಆಯ್ಕೆಯಾದ ವಿದ್ಯಾರ್ಥಿಗಳು ಎಂ.ಹೆಚ್.ಆರ್.ಡಿ ನವದೆಹಲಿ ಇವರು ಸಿದ್ಧಪಡಿಸಿರುವ ಎನ್.ಎಸ್.ಪಿ 2.0 **ವೆಬ್‌ಸೈಟ್:www.scholorships.gov.in** ನಲ್ಲಿ ವಿದ್ಯಾರ್ಥಿ ವೇತನಕ್ಕೆ 9ನೇ ತರಗತಿಯಲ್ಲಿ ಹೊಸದಾಗಿ **(Fresh)** ಅರ್ಜಿ ಸಲ್ಲಿಸಬೇಕು ನಂತರ 10, 11 ಮತ್ತು 12ನೇ ತರಗತಿಗಳಲ್ಲಿ ಪ್ರತಿವರ್ಷ ವಿದ್ಯಾರ್ಥಿ ವೇತನಕ್ಕಾಗಿ ನವೀಕ–ರಿಸಬೇಕಿರುತ್ತದೆ.



## ವಿದ್ಯಾರ್ಥಿ ವೇತನ ಮುಂದುವರಿಕೆಗೆ ನಿಬಂಧನೆಗಳು

NMMS ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮುಂದುವರಿಕೆಗೆ ಹಾಗೂ ಶೈಕ್ಷಣಿಕ ಹಿರಿಮೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ಕೆಳಗಿನ ನಿಬಂಧನೆಗಳನ್ನು ವಿಧಿಸಲಾಗಿದೆ.

* ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು 9, ಮತ್ತು 11ನೇ ತರಗತಿಗಳಲ್ಲಿ ಕನಿಷ್ಟ ಶೇ.55 ರಷ್ಟು ಮತ್ತು 10ನೇ ತರಗತಿಯಲ್ಲಿ ಕನಿಷ್ಠ ಶೇ.60 ರಷ್ಟು ಅಂಕಗಳನ್ನು ಗಳಿಸಬೇಕಾಗುತ್ತದೆ. ಪ.ಜಾತಿ/ಪ.ಪಂ ವಿದ್ಯಾರ್ಥಿಗಳಿಗೆ ಶೇ.5ರಷ್ಟು ವಿನಾಯಿತಿ ಇರುತ್ತದೆ.
* ಆಯ್ಕೆಯಾದ ವಿದ್ಯಾರ್ಥಿಗಳು ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ ಶಾಲೆ/ಕಾಲೇಜಿನಲ್ಲಿ ಮಾತ್ರ ತಮ್ಮ ವಿದ್ಯಾಭ್ಯಾಸ ಮುಂದುವರಿಸಬೇಕು.
* ವಿದ್ಯಾರ್ಥಿಯು 9, 10 ಮತ್ತು 11 ನೇ ತರಗತಿಯಲ್ಲಿ ಪ್ರಥಮ ಪ್ರಯತ್ನದಲ್ಲೇ ತೇರ್ಗಡೆಯಾಗಬೇಕು
* ವಿದ್ಯಾರ್ಥಿಗಳು ಯಾವುದಾದರು ಒಂದು ಯೋಜನೆಯ ವಿದ್ಯಾರ್ಥಿ ವೇತನವನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.
* ಐ.ಟಿ.ಐ. ಹಾಗೂ ಡಿಪ್ಲೊಮೊ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವವರು ವಿದ್ಯಾರ್ಥಿ ವೇತನಕ್ಕೆ ಅರ್ಹರಾಗಿರುವುದಿಲ್ಲ.
* ವಿದೇಶಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕೆ ಅರ್ಹರಾಗಿರುವುದಿಲ್ಲ.

ಎನ್.ಟಿ.ಎಸ್.ಇ–ಎನ್.ಎಂ.ಎಂ.ಎಸ್ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಮಂಡಳಿಯ ವೆಬ್‌ಸೈಟ್‌ನ ಶಾಲಾ ಲಾಗಿನ್‌ನಲ್ಲಿ ಶಾಲೆಗೆ ಒಂದರಂತೆ ಜನರೇಟ್ ಆಗುವ ಪೂರ್ವಮುದ್ರಿತ ಚಲನ್ ಅನ್ನು ಶಾಲಾ ಮುಖ್ಯ ಶಿಕ್ಷಕರು ಡೌನ್‌ಲೋಡ್ ಮಾಡಿಕೊಂಡು ಕೆನರಾ ಬ್ಯಾಂಕ್ ಶಾಖೆಯಲ್ಲಿ ಪರೀಕ್ಷಾ ಶುಲ್ಕವನ್ನು ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಶುಲ್ಕ ಪಾವತಿಸಿದ ಶಾಲೆಯ ಎಲ್ಲಾ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ 15 ದಿನಗಳ ಮುಂಚಿತವಾಗಿ ಶಾಲಾ ಲಾಗಿನ್‌ನಲ್ಲಿ ಪ್ರವೇಶಪತ್ರಗಳು ದೊರೆಯುವಂತೆ ಕ್ರಮವಹಿಸಲಾಗುವುದು. ವಿದ್ಯಾರ್ಥಿಗಳು ಉತ್ತ–ರಿಸಲು ಪೂರ್ವಮುದ್ರಿತ ಒ.ಎಂ.ಆರ್‌ಗಳನ್ನು ನೀಡಲಾಗುವುದು. ಕೋವಿಡ್–19 ರ ಈ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ಆರೋಗ್ಯ ಇಲಾಖೆ ಹಾಗೂ ಸರ್ಕಾರ ಹೊರಡಿಸುವ ಎಸ್.ಒ.ಪಿ ಅನ್ವಯ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಯಾವೊಬ್ಬ ವಿದ್ಯಾರ್ಥಿಗೂ ಪರೀಕ್ಷಾ ಸಂದರ್ಭದಲ್ಲಿ ತೊಂದರೆಯಾಗದಂತೆ ಸೂಕ್ತ ಕ್ರಮವಹಿಸಲಾಗುವುದು.

2020–21 ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಕೋವಿಡ್–19 ರ ನಡುವೆಯೂ ಕೂಡ ಈ ಎರಡೂ ಪರೀಕ್ಷೆಗಳಿಗೆ 2,89,469 ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿರುವುದು ವಿಶೇಷವಾಗಿದೆ. ಕಳೆದ ಸಾಲಿಗಿಂತ 35,000 ಕ್ಕೂ ಅಧಿಕ ಸಂಖ್ಯೆಯಲ್ಲಿ ಅರ್ಜಿಗಳು ಸಲ್ಲಿಕೆಯಾಗಿರುತ್ತವೆ. ಈ ಪರೀಕ್ಷೆಗಳ ಸಂಬಂಧ ಇಲಾಖೆಯ ಸುತ್ತೋಲೆಗಳಲ್ಲಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಇರಬೇಕಾದ ಅರ್ಹತೆಗಳು, ಬೇಕಾಗುವ ಅಗತ್ಯ ದಾಖಲೆಗಳು, ಅರ್ಜಿ ಸಲ್ಲಿಸುವ ವಿಧಾನ, ವಿವಿಧ ಹಂತದ ಅಧಿಕಾರಿಗಳ ಜವಾಬ್ದಾರಿ, ಪರೀಕ್ಷೆಯ ಸ್ವರೂಪ, ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗೆ ದೊರೆಯುವ ವಿದ್ಯಾರ್ಥಿವೇತನ ಮುಂತಾದ ಅಂಶಗಳನ್ನು ವಿವರವಾಗಿ ತಿಳಿಸಲಾಗಿತ್ತು.

ಇದರ ಜೊತೆಗೆ ಸುತ್ತೋಲೆ ಹೊರಡಿಸಿದ ದಿನಾಂಕದಿಂದ ಪ್ರಸ್ತುತದವರೆಗೂ ಸಹಾಯವಾಣಿ ಕೇಂದ್ರ ಚಾಲ್ತಿಯಲ್ಲಿದ್ದು, ಸಹಾಯವಾಣಿಗೆ ಬರುವ ಕರೆಗಳನ್ನು / ಅಹವಾಲುಗಳನ್ನು ಸ್ವೀಕರಿಸಿ ತ್ವರಿತಗತಿಯಲ್ಲಿ ಇತ್ಯರ್ಥ ಪಡಿಸಲಾಗಿರುತ್ತದೆ.

ಇಲಾಖೆಯ ವಿವಿಧ ಹಂತದ ಅಧಿಕಾರಿಗಳಿಗೆ ವಿಡಿಯೋ ಕಾನ್ಫರೆನ್ಸ್, ಪ್ರಸಾರ ಭಾರತಿ (ಆಕಾಶವಾಣಿ) ಹಾಗೂ ದೂರದರ್ಶನ ಚಂದನ ವಾಹಿನಿಯ ಮೂಲಕ ಪರೀಕ್ಷೆಗೆ ಅರ್ಜಿ ಸಲ್ಲಿಸುವ, ಸಿದ್ಧತೆ ನಡೆಸುವ, ಪಠ್ಯಕ್ರಮದ ಬಗ್ಗೆ ಮುಂತಾದ ವಿಷಯಗಳನ್ನು ವಿವರವಾಗಿ ಮನದಟ್ಟು ಮಾಡಿಕೊಡಲಾಗಿದೆ. ಜೊತೆಗೆ ವಾಟ್ಸಾಪ್ ಗುಂಪುಗಳ ಮೂಲಕವೂ ಕೂಡ ಜಿಲ್ಲಾ ನೋಡಲ್ ಅಧಿಕಾರಿಗಳು ಹಾಗೂ ಇಲಾಖೆಯ ವಿವಿಧ ಹಂತದ ಅಧಿಕಾರಿಗಳು, ಶಾಲಾ ಮುಖ್ಯ ಶಿಕ್ಷಕರಿಗೆ ಮಾಹಿತಿಯನ್ನು ಕ್ಷಿಪ್ರಗತಿಯಲ್ಲಿ ಹಂಚಿಕೊಳ್ಳಲಾಗಿದೆ.

ಈ ಎರಡೂ ಪರೀಕ್ಷೆಗಳು ವಿದ್ಯಾರ್ಥಿಗಳಿಗೆ ಅತ್ಯಂತ ಪ್ರಮುಖ ಸ್ಪರ್ಧಾತ್ಮಕ ಪರೀಕ್ಷೆಗಳಾಗಿದ್ದು, ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳ ಅರ್ಜಿ ಸಲ್ಲಿಸಲು ಕೆ.ಎಸ್.ಕ್ಯು.ಎ.ಎ.ಸಿ ಕಛೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು, ಇಲಾಖೆಯ ಜಿಲ್ಲಾ ಹಂತದ ಮತ್ತು ತಾಲ್ಲೂಕು ಹಂತದ ಅಧಿಕಾರಿಗಳು, ಶಾಲಾ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರು ಹೆಚ್ಚಿನ ಕಾಳಜಿ ವಹಿಸಿರುವುದು ಪ್ರಶಂಸಾರ್ಹ ಕಾರ್ಯವಾಗಿದೆ.

ಅದರಂತೆ ವಿದ್ಯಾರ್ಥಿಗಳಿಗೆ ಮನೆಯ ವಾತಾವರಣದಲ್ಲಿ ಪಾಲಕ/ಪೋಷಕರ ಪ್ರೇರಣೆ ಮತ್ತು ಸಹಕಾರದ ಜೊತೆಗೆ ಪರೀಕ್ಷೆ ಎದುರಿಸುವ ಅಗತ್ಯವಾದ ತರಬೇತಿ ಹಾಗೂ ಸೂಕ್ತ ಮಾರ್ಗದರ್ಶನ ನೀಡಿ ಪರೀಕ್ಷೆಗೆ ಅಣಿಗೊಳಿಸಬೇಕಿದೆ. ಆ ಮೂಲಕ ವಿದ್ಯಾರ್ಥಿಗಳಲ್ಲಿ ಪರೀಕ್ಷೆಯ ಬಗ್ಗೆ ಆತ್ಮಸ್ಥೈರ್ಯ ಉಂಟುಮಾಡಿ ಉತ್ತಮ ರೀತಿಯಲ್ಲಿ ಪರೀಕ್ಷೆ ಬರೆಯಲು ಮಾನಸಿಕವಾಗಿ ಸದೃಢರಾಗುತ್ತಾರೆ. ಈ ಪರೀಕ್ಷೆಗಳು ವಿದ್ಯಾರ್ಥಿಗಳು ಭವಿಷ್ಯದಲ್ಲಿ ಎದುರಿಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮೆಟ್ಟಿಲುಗಳಾಗಲಿವೆ.